ಮಧುಗಿರಿಯ ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯದಲ್ಲಿ

**ಸಿ.ಸಿ. ಸಂಖ್ಯೆ 46/2026**

ಪ್ರ.ವ.ಬೋ.ತಾಃ 30-07-2026

ಚಾಸಾಃ 2 ಫ್ರಾಸಾಃ 2

| | |
|---|---|
| ಸಾಕ್ಷಿಯ ಹೆಸರು | ಈರಣ್ಣ |
| ತಂದೆ/ಗಂಡನ ಹೆಸರು | ಎಲೆ ಚಿತ್ತಪ್ಪ |
| ವಯಸ್ಸು | 55 ವರ್ಷ |
| ವೃತ್ತಿ | ವ್ಯವಸಾಯ |
| ವಾಸ | ಬಸವನಹಳ್ಳಿ ಗೊಲ್ಲರಹಟ್ಟಿ, ಮಧುಗಿರಿ ತಾ. |

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ. ರವರಿಂದಃ-**

ಆರೋಪಿ ನನ್ನ ಮಗ. ಚಾಸಾ.1 ನನ್ನ ಹೆಂಡತಿ. ಆರೋಪಿ ಎಂದೂ ಸಹ ನನಗಾಗಲೀ ಅಥವಾ ಚಾಸಾ.1 ರವರಿಗಾಗಲೀ ಅವಾಚ್ಯ ಶಬ್ದಗಳಿಂದ ಬೈದಿಲ್ಲ, ಕೈಗಳಿಂದ ತಳ್ಳಾಡಿ ಚಾಸಾ.1 ರವರ ಎದೆಗೆ ಮತ್ತು ನನ್ನ ತಲೆಗೆ ಹಲ್ಲೆ ಮಾಡಿ ನೋವುಂಟುಪಡಿಸಿರುವುದಿಲ್ಲ. ನನ್ನ ಬಲಗೈಗೆ ತೀವ್ರ ಸ್ವರೂಪದ ಗಾಯವನ್ನುಂಟು ಮಾಡಿರುವುದಿಲ್ಲ ಹಾಗೂ ಜೀವ ಬೆದರಿಕೆ ಹಾಕಿರುವುದಿಲ್ಲ. ಈ ಸಂಬಂಧವಾಗಿ ನಾನಗಲೀ ಅಥವಾ ಚಾಸಾ.1 ರವರಾಗಲೀ ಯಾವುದೇ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುವುದಿಲ್ಲ. ಈಗ ತೋರುತ್ತಿರುವ ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ ಕಲಂ 183 ರ ಅಡಿಯಲ್ಲಿ ನೀಡಲಾದ ಹೇಳಿಕೆಯಲ್ಲಿರುವ ಸಹಿ ನನ್ನದಾಗಿರುತ್ತದೆ. ಆ ಹೇಳಿಕೆಯನ್ನು ನಿಪಿ.5 ಎಂದು, ಸಾಕ್ಷಿಯ ಸಹಿಯನ್ನು ನಿಪಿ.5(ಎ) ಎಂದು ಗುರುತಿಸಲಾಯಿತು. ಆದರೆ ಅದರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನಾನು

ಪೊಲೀಸರು ಹೇಳಿದಂತೆ ಮಾನ್ಯ ನ್ಯಾಯಾಧೀಶರ ಮುಂದೆ ಹೇಳಿಕೆ ನೀಡಿರುತ್ತೇನೆ. ಆದರೆ ಈ ದಿನ ನ್ಯಾಯಾಲಯದ ಮುಂದೆ ಹೇಳುತ್ತಿರುವ ಅಂಶಗಳು ಸತ್ಯವಾಗಿರುತ್ತವೆ. ನ್ಯಾಯಾಲಯದ ಮುಂದಿರುವ ದೊಣ್ಣೆಯನ್ನು ಯಾವ ಉದ್ದೇಶಕ್ಕಾಗಿ ಅಮಾನತ್ತುಪಡಿಸಿಕೊಂಡರು ಎಂಬುದು ನನಗೆ ಗೊತ್ತಿಲ್ಲ. ಈ ಸಂಬಂಧವಾಗಿ ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸಸಅ ರವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**<u>ಪಾಟೀ ಸವಾಲುಃ</u>– ಮಾನ್ಯ ಸ.ಸ.ಅ. ರವರಿಂದಃ–**

ದಿಃ 08.11.2025 ರಂದು ಬೆಳಗ್ಗೆ 7.30 ಗಂಟೆ ಸಮಯದಲ್ಲಿ ಆರೋಪಿ ಹೆಚ್.ಬಸವಹಳ್ಳಿ ಗ್ರಾಮದ ಸರ್ವೆ ನಂಬರ್ 46/1 ರ ಜಮೀನಿನಲ್ಲಿ ನಾನು ಮತ್ತು ಚಾಸಾ.1ರವರು ಕಾಕಡಾ ಮೊಗ್ಗನ್ನು ಬಿಡಿಸುತ್ತಿರುವಾಗ ಆರೋಪಿ ನಮ್ಮ ಕುಟುಂಬದ ಸೈಟ್ ಗಳು ಮತ್ತು ಜಮೀನಿನ ವಿಚಾರವಾಗಿ ಜಗಳ ತೆಗೆದು, ನನ್ನ ಹಾಗೂ ಚಾಸಾ.1ರವರನ್ನು ಅವಾಚ್ಯ ಶಬ್ದಗಳಿಂದ ಬೈದು, ಕೈಗಳಿಂದ ತಳ್ಳಿ ನೂಕಾಡಿ, ಕೆಳಗೆ ಬೀಳಿಸಿ ಇದರಿಂದ ಚಾಸಾ.1ರವರ ಎದೆಗೆ ಮತ್ತು ನನ್ನ ತಲೆಗೆ ಸಾಮಾನ್ಯ ಸ್ವರೂಪದ ಗಾಯಗಳಾಗಿ, ಆರೋಪಿ ದೊಣ್ಣೆಯಿಂದ ನನ್ನ ಬಲಗೈಗೆ ಹೊಡೆದು ತೀವ್ರ ಸ್ವರೂಪದ ಗಾಯವನ್ನುಂಟು ಮಾಡಿ, ಜೀವ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಈ ಸಂಬಂಧವಾಗಿ ನಾನು ಮತ್ತು ಚಾಸಾ.1ರವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದೆವು ಎಂದರೆ ಸರಿಯಲ್ಲ. ಈ ಘಟನೆಯ ಸಂಬಂಧ ನಾನು ಮಾನ್ಯ ನ್ಯಾಯಾಧೀಶರ ಮುಂದೆ ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ ಕಲಂ 183 ರ ಅಡಿಯಲ್ಲಿ

ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಅದರಲ್ಲಿ ಬರೆದಿರುವ ವಿಚಾರವನ್ನು ಓದಿ ತಿಳಿದುಕೊಂಡು ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ನ್ಯಾಯಾಲಯದ ಮುಂದಿರುವ ದೊಣ್ಣೆಯನ್ನು ಪೊಲೀಸರು ಯಾವ ಉದ್ದೇಶಕ್ಕಾಗಿ ಅಮಾನತ್ತುಪಡಿಸಿಕೊಂಡರು ಎಂಬುದು ನನಗೆ ಗೊತ್ತಿಲ್ಲ. ಈ ಬಗ್ಗೆ ನಾನು ಪೊಲೀಸರ ಮುಂದೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಆ ಅಲ್ಲಗೆಳೆದ ಹೇಳಿಕೆಯನ್ನು ನಿಪಿ.6 ಎಂದು ಗುರುತಿಸಲಾಯಿತು. ನಾನು, ಚಾಸಾ.1 ಹಾಗೂ ಆರೋಪಿ ನ್ಯಾಯಾಲಯದ ಹೊರಗೆ ರಾಜೀ ಆಗಿದ್ದೇವೆ ಎಂದರೆ ಸರಿ. ಆ ಕಾರಣಕ್ಕಾಗಿ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ– ಆರೋಪಿ ಪರ ವಕೀಲರಿಂದಃ**– ಏನೂ ಇಲ್ಲ.

ಮರು ವಿಚಾರಣೆಃ– ಇಲ್ಲಾ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ಗಣಕೀಕೃತಗೊಳಿಸಲಾಯಿತು)

ಓ.ಹೇ.ಸಾ.ಸ.ಇ.ಒ.

ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆಎಂಎಫ್‌ಸಿ, ಮಧುಗಿರಿ